# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಶೆಟ್ಟಿಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.13/ಪಿಆರ್: :2021-22 ದಿನಾಂಕ: 11.03.2022

## ಮಲ್ಲಸಂದ್ರ ವಾರ್ಡ್-13 ರ ವಾರ್ಡ್ ಸಭೆಯ (Ward Decentralized Traige and Emergency Response (DETER) Committee for COVID-19) ನಡವಳಿ

ದಿನಾಂಕ: 11.03.2022 ರಂದು ಬೆಳಗ್ಗೆ 11.00 ಗಂಟೆಗೆ ಶ್ರೀ.ಎಸ್.ಎಲ್. ವಿಶ್ವನಾಥ್, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ಮಲ್ಲಸಂದ್ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಹಾಜರಿದ್ದವರು:

1. ಶ್ರೀ. ರುದ್ರಮುನಿ ಆರ್.ಟಿ., ಸಹಾಯಕ ಅಭಿಯಂತರರು, ವಾರ್ಡ್ ನಂ.13 ಮಲ್ಲಸಂದ್ರ.
2. ಶ್ರೀ. ಪಾರ್ಥ, ಹಿರಿಯ ಆರೋಗ್ಯ ಪರಿವೀಕ್ಷಕರು, ಮಲ್ಲಸಂದ್ರ
3. ಶ್ರೀ ಲೋಕರಾಜ್, ವಾಟರ್ ಇನ್ಸ್‌ಪೆಕ್ಟರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ.
4. ಶ್ರೀ ಶಿವಲಿಂಗೇಗೌಡ, ತೋಟಗಾರಿಕಾ ಇಲಾಖೆ
5. ಶ್ರೀ ಸಂಜೀವಪ್ಪ, ಅರಣ್ಯ ಇಲಾಖೆ.
6. ಶ್ರೀ ರಾಜ್‌ಕುಮಾರ್, ಕಂದಾಯ ಪರಿವೀಕ್ಷಕರು
7. ಶ್ರೀ ಉಮೇಶ್, ಬೋರ್‌ವೆಲ್ ವಿಭಾಗ.
8. ಶ್ರೀ ಬೈಲಪ್ಪ ರವರು ವಾರ್ಡ್ ಸಮಿತಿ ಸದಸ್ಯರು.
9. ಶ್ರೀ ಲಕ್ಷ್ಮೀಪತಿ, ರವರು ವಾರ್ಡ್ ಸಮಿತಿ ಸದಸ್ಯರು.
10. ಶ್ರೀ ಮಹಾದೇವ್ ಎಂ. ಮಾರ್ಷಲ್, ಮಲ್ಲಸಂದ್ರ.
11. ಶ್ರೀ ಬಾಲಾಜಿ ಎಂ, ಸೂಪರ್ ವೈಸರ್.
12. ಶ್ರೀ ಅಂಬರೀಶ್ ಡಿ.ಎಲ್. ವಾರ್ಡ್ ಸಮಿತಿ ಸದಸ್ಯರು.
13. ಶ್ರೀಮತಿ ವಿಜಯಲಕ್ಷ್ಮೀ, ವಾರ್ಡ್ ಸಮಿತಿ ಸದಸ್ಯರು.
14. ಶ್ರೀ ಗೋಪಾಲ್, ವಾರ್ಡ್ ಸಮಿತಿ ಸದಸ್ಯರು.

ಶ್ರೀ. ರುದ್ರಮುನಿ ಆರ್.ಟಿ., ವಾರ್ಡ್ ಕಾರ್ಯದರ್ಶಿರವರು ವಾರ್ಡ್ ಸಭೆಯಲ್ಲಿ ನೋಡೆಲ್ ಅಧಿಕಾರಿಯಾದ ವಿಶ್ವನಾಥ್ ರವರಿಗೆ ಹಾಗೂ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರುಗಳಿಗೆ ಮತ್ತು ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

- ವಾರ್ಡ್ ಸಮಿತಿ ಅಧ್ಯಕ್ಷರು ಮಾತನಾಡಿ ಸಭೆಗೆ ಪೂರಕವಾಗಿ ವಾರ್ಡ್ ಕಮಿಟಿ ಸದಸ್ಯರು ಮತ್ತು ಅಧಿಕಾರಿ ವರ್ಗದವರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಾಗದಿರುವುದನ್ನು ಗಮನಿಸಿ ಅಧಿಕಾರಿಗಳಿಗೆ ಮತ್ತು ವಾರ್ಡ್ ಸಮಿತಿ ಸದಸ್ಯರುಗಳಿಗೆ ಸಭೆಗೆ ಹಾಜರಾಗುವಂತೆ ತಿಳುವಳಿಕೆ ಪತ್ರ ನೀಡಲು ಸೂಚಿಸಿದರು.

- ಶ್ರೀ ಭೈಲಪ್ಪ ರವರು ಮಾತನಾಡಿ ಬಿಬಿಎಂಪಿ ವಾರ್ಡ್ ವ್ಯಾಪ್ತಿಯ ವಾಟರ್‌ಮೆನ್‌ಗಳು ನೀರು ಅಸಮರ್ಪಕ ಸರಬರಾಜು ಬಗ್ಗೆ ಸಾರ್ವಜನಿಕರು ವಿಚಾರಿಸಿದಾಗ ಅವಾಚ್ಯ ಶಬ್ದಗಳ ಬಳಕೆ ಮತ್ತು ದುರ್ವತನೆ ತೋರುತ್ತಾರೆಂದು ತಿಳಿಸಿದರು.

- ಶ್ರೀ ಗೋಪಾಲ್ ರವರು ಮಾತನಾಡಿ 1ನೇ ಮುಖ್ಯರಸ್ತೆಯಿಂದ 10ನೇ ಅಡ್ಡರಸ್ತೆವರೆಗೆ ಸಮರ್ಪಕವಾಗಿ ರಸ್ತೆ ಕಸ ಗುಡಿಸುವಿಕೆ ಆಗುತ್ತಿಲ್ಲವೆಂದು ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ಶಿಥಿಲಾವಸ್ಥೆಲ್ಲಿರುವ ಮರದ ಕೊಂಬೆಗಳನ್ನು ತೆರವುಗೊಳಿಸುವಂತೆ ಕೋರಿದರು.

- ಶ್ರೀಮತಿ ವಿಜಯಲಕ್ಷ್ಮೀ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿನ ಚರಂಡಿಗಳಲ್ಲಿ ಹೂಳು ತೆಗೆದು ನೀರು ಸರಾಗವಾಗಿ ಹರಿಯುವಂತೆ ಕ್ರಮ ವಹಿಸಲು ಕೋರಿದರು.

ಈ ಮೇಲಿನ ಎಲ್ಲಾ ಅಂಶಗಳನ್ನು ತ್ವರಿತಗತಿಯಲ್ಲಿ ಬಗೆಹರಿಸಲು ವಾರ್ಡ್ ಅಧ್ಯಕ್ಷರಾದ ಶ್ರೀ ವಿಶ್ವನಾಥ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ವಿಭಾಗದ ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಸೂಚಿಸಿದರು ಮತ್ತು ಮುಂದಿನ ಸಭೆಯಲ್ಲಿ ಈ ಬಗ್ಗೆ ಅನುಸರಣಾ ವರದಿಯನ್ನು ಸಲ್ಲಿಸುವಂತೆ ತಿಳಿಸಿದರು ಮತ್ತು ಸಭೆಯಲ್ಲಿ ಹಾಜರಿದ್ದ ಆರೋಗ್ಯ ಸಿಬ್ಬಂದಿಗಳೊಂದಿಗೆ ಚರ್ಚಿಸಿ ಕೋವಿಡ್ ವ್ಯಾಕ್ಸಿನೇಷನ್, ಬೂಸ್ಟರ್ ಡೋಸ್ ಮತ್ತು ಡೆಂಗ್ಯೂ ಪ್ರಕರಣಗಳ ಬಗ್ಗೆ ಮಾಹಿತಿ ಪಡೆದರು. ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸದಸ್ಯರಿಗೆ, ಅಧಿಕಾರಿಗಳಿಗೆ, ಸಾರ್ವಜನಿಕರಿಗೆ ಧನ್ಯವಾದಗಳನ್ನು ತಿಳಿಸುತ್ತಾ ವಾರ್ಡ್ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸದಸ್ಯ ಕಾರ್ಯದರ್ಶಿ | ನೋಡಲ್ ಅಧಿಕಾರಿ ಹಾಗೂ 11/3/2022 |
| ಹಾಗೂ ಸಹಾಯಕ ಅಭಿಯಂತರರು | ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.13, ಮಲ್ಲಸಂದ್ರ |
| ವಾರ್ಡ್ ನಂ. 13, ಮಲ್ಲಸಂದ್ರ | ಮತ್ತು ತಹಶೀಲ್ದಾರ್, ಉಪ ಆಯುಕ್ತರು(ಭೂಸ್ವಾಧೀನ) ಕ್ಕೆ ಶ್ರೀ |
| ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

<u>ಅಧಿಕಾರಿಗಳ ಮಾಹಿತಿಗಾಗಿ:-</u>

1) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7) ಸಹಾಯಕ ಕಾರ್ಯಪಾಲಕ ಅಭಿಯಂತರರು (ಶೆ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಂದಾಯ ಅಧಿಕಾರಿ (ಶೆ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
11) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 13 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12) ಕಛೇರಿ ಪ್ರತಿ.